# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 495 ಗ್ರಾಪಂಅ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:13-07-2018

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
**ಬೆಂಗಳೂರು.**

**ಇವರಿಗೆ:**

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು,
ಜಿಲ್ಲಾ ಪಂಚಾಯಿತಿಗಳು,
2) ಎಲ್ಲಾ ಕಾರ್ಯನಿರ್ವಾಹಕಾಧಿಕಾರಿಗಳು,
ತಾಲ್ಲೂಕು ಪಂಚಾಯಿತಿಗಳು,
3) ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು,
ಗ್ರಾಮ ಪಂಚಾಯತಿಗಳು

ಮಾನ್ಯರೆ,

**ವಿಷಯ:** ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾಯಿತ ಸದಸ್ಯರು ಅವರ ಮತ್ತು ಅವರ ಅವಿಭಕ್ತ ಕುಟುಂಬದ ಆಸ್ತಿ ಮತ್ತು ಹೊಣೆಗಾರಿಕೆಯ ಘೋಷಣೆಯನ್ನು ಆನ್-ಲೈನ್ ಮುಖಾಂತರ ಸಲ್ಲಿಸುವ ಬಗ್ಗೆ.

**ಉಲ್ಲೇಖ:** ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ ರವರ ಪತ್ರ ಸಂಖ್ಯೆ: ರಾಚುಆ/01/WBS-2/2015, ದಿನಾಂಕ:21-03-2018.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ ರವರು ಉಲ್ಲೇಖಿತ ಪತ್ರದಲ್ಲಿ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾಯಿತ ಸದಸ್ಯರು ಅವರ ಮತ್ತು ಅವರ ಅವಿಭಕ್ತ ಕುಟುಂಬದ ಆಸ್ತಿ ಮತ್ತು ಹೊಣೆಗಾರಿಕೆಯ ಘೋಷಣೆಯನ್ನು ಆನ್-ಲೈನ್ ಮುಖಾಂತರ ಸಲ್ಲಿಸುವ ಬಗ್ಗೆ ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಎಲ್ಲಾ ಚುನಾಯಿತ ಸದಸ್ಯರುಗಳಿಗೆ ಅಗತ್ಯ ತಿಳುವಳಿಕೆ ನೀಡಲು ನಿರ್ದೇಶನ ನೀಡಬೇಕಾಗಿ ಸರ್ಕಾರಕ್ಕೆ ಬರೆದಿರುವ ಪತ್ರವನ್ನು ಇದರೊಂದಿಗೆ ಲಗತ್ತಿಸಿದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಬಿ), 136(ಎ), 175(ಎ) ಮತ್ತು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಗಳ ಚುನಾಯಿತ ಸದಸ್ಯರ ಆಸ್ತಿ ಘೋಷಣೆ) ನಿಯಮಗಳು, 2016 ರಂತೆ ಕ್ರಮವಾಗಿ ಗ್ರಾಮ / ತಾಲ್ಲೂಕು / ಜಿಲ್ಲಾ ಪಂಚಾಯತ್ ಸದಸ್ಯರು ಎರಡು ಲಕ್ಷಕ್ಕಿಂತ ಹೆಚ್ಚಿನ ಚರ ಮತ್ತು ಸ್ಥಿರ ಆಸ್ತಿಯನ್ನು ಮತ್ತು ಹೊಣೆಗಾರಿಕೆಯನ್ನು ಹೊಂದಿರುವುದರ ಬಗ್ಗೆ ರಾಜ್ಯ ಚುನಾವಣಾ ಆಯೋಗದ ಮುಂದೆ ಘೋಷಣೆಯನ್ನು ನಮೂನೆ-1 ರಲ್ಲಿ ಸಂಬಂಧಪಟ್ಟ ಪಂಚಾಯತ್ ರಾಜ್ ಅಭಿವೃದ್ಧಿ ಅಧಿಕಾರಿ / ಕಾರ್ಯನಿರ್ವಾಹಕ ಅಧಿಕಾರಿ / ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ ದಾಖಲು ಮಾಡಬೇಕಿರುತ್ತದೆ.

ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಸದಸ್ಯರುಗಳು ಆಸ್ತಿ ಘೋಷಣೆಯನ್ನು ಆನ್-ಲೈನ್ ಮುಖಾಂತರ ಸಲ್ಲಿಸಲು ಆಯೋಗವು ಎನ್.ಐ.ಸಿ. ಮುಖಾಂತರ ತಂತ್ರಾಂಶವನ್ನು ಸಿದ್ಧಪಡಿಸಿರುತ್ತದೆ. ಸದರಿ ತಂತ್ರಾಂಶದ ಕುರಿತಂತೆ ತರಬೇತಿಗಾಗಿ ಪ್ರಾತ್ಯಕ್ಷಿಕೆಯನ್ನು ಆಯೋಗವು ಸಿದ್ಧಪಡಿಸಿ, ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾಯಿತ ಸದಸ್ಯರುಗಳಿಗೆ ತರಬೇತಿ ನೀಡುವಂತೆ ಸಂಬಂಧಪಟ್ಟ ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಕಾರ್ಯನಿರ್ವಾಹಕ ಅಧಿಕಾರಿಗಳು / ಪಂಚಾಯತ್ ಅಭಿವೃದ್ಧಿ ಅಧಿಕಾರಿ ರವರಿಗೆ ರಾಜ್ಯ ಚುನಾವಣಾ ಆಯೋಗದಿಂದ ಈಗಾಗಲೇ ತಿಳಿಸಲಾಗಿದೆ.

ಸದರಿ ತಂತ್ರಾಂಶವನ್ನು ಪ್ರಸಕ್ತ ಸಾಲಿನಿಂದ ಕಾರ್ಯರೂಪಕ್ಕೆ ತರಲು ರಾಜ್ಯ ಚುನಾವಣಾ ಆಯೋಗವು ನಿರ್ಧರಿಸಿರುವುದರಿಂದ, 2017-18 ನೇ ಸಾಲಿನಿಂದ ಎಲ್ಲಾ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾಯಿತ ಸದಸ್ಯರು ಅವರ ಆಸ್ತಿ ಮತ್ತು ಹೊಣೆಗಾರಿಕೆ ಘೋಷಣೆಯನ್ನು ಆನ್-ಲೈನ್ ಮೂಲಕ ದಾಖಲಿಸಲು ಅನುವಾಗುವಂತೆ ಎಲ್ಲಾ ಚುನಾಯಿತ ಸದಸ್ಯರುಗಳಿಗೆ ಅಗತ್ಯ ತಿಳುವಳಿಕೆ ನೀಡಲು ಕ್ರಮ ವಹಿಸುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

13/7

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

13/7

**ಪ್ರತಿ:**

1) ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕರ್ನಾಟಕ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಿ ಕಟ್ಟಡ, (ಹಿಂಭಾಗ) ನಂ: 8, 1ನೇ ಮಹಡಿ, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು.

ಕಛೇರಿ ಪ್ರತಿ